**ದಿನಾಂಕ 17.06.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 1** ಎಂದು, ದೂರಿನ ದೃಢೀಕೃತ ಪ್ರತಿಯನ್ನು **ನಿಪಿ 2** ಎಂದು, ನಿಪಿ 2 ರ ತರ್ಜುಮೆ ಪ್ರತಿಯನ್ನು **ನಿಪಿ 2(ಎ)** ಎಂದು, (ಸದರಿ ದಾಖಲಾತಿಯಲ್ಲಿ ತರ್ಜುಮೆದಾರರ ಮೊಹರು ಇಲ್ಲದೇ ಇದ್ದು, ಅರ್ಜಿದಾರರ ಪರ ವಕೀಲರಿಗೆ ತರ್ಜುಮೆದಾರ ವಕೀಲರ ಮೊಹರನ್ನು ಹಾಕಿಸುವಂತೆ ಸೂಚಸಲಾಗಿರುತ್ತದೆ), ಶವ ಪರೀಕ್ಷಾ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 3** ಎಂದು, ನಕ್ಷೆಯ ದೃಢೀಕೃತ ಪ್ರತಿಯನ್ನು **ನಿಪಿ 4** ಎಂದು, ಚುನಾವಣಾ ಗುರುತಿನ ಚೀಟಿ ಮತ್ತು ಆಧಾರ್ ಕಾರ್ಡುಗಳ ನೋಟರಿ ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಗಳನ್ನು ಕ್ರಮವಾಗಿ **ನಿಪಿ 5 ಮತ್ತು 6** ಎಂದು ಗುರುತಿಸಲಾಯಿತು.

1 ಮತ್ತು 2ನೇ ಎದುರುದಾರರ ಪರ ಮಾನ್ಯ ವಕೀಲರು ಪ್ರತಿವಾದ ಪತ್ರ ಸಲ್ಲಿಸದಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**